ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಸವದತ್ತಿ ತಾಲ್ಲೂಕು ಆಸ್ಪತ್ರೆಯನ್ನು 100 ಹಾಸಿಗೆಗಳ ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. ಹೆಚ್ಚಿನ ಸಮುದಾಯ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅವಕಾಶ ಇರುವುದಿಲ್ಲ.

1067 (1120) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ;

ಅ) 2006ರ ಸೆಪ್ಟೆಂಬರ್ ತಿಂಗಳಲ್ಲಿ ರಾಜೀವಗಾಂಧಿ ಆರೋಗ್ಯ ವಿಶ್ವವಿದ್ಯಾನಿಲಯವು ನಡೆಸಿದ ಎಂ.ಡಿ.ಎಸ್.ಪರೀಕ್ಷೆಯಲ್ಲಿ ಶೇಕಡಾ 20ಕ್ಕೂ ಕಡಿಮೆ ಪ್ರಮಾಣದಲ್ಲಿ ವಿದ್ಯಾರ್ಥಿಗಳು ತೇರ್ಗಡೆಯಾಗಿರುವುದು ನಿಜವೆ;

ಆ) ಸದರಿ ಪರೀಕ್ಷೆಯ ಪೆರಿಯೋಡಾಂಟಿಕ್ಸ್ ವಿಭಾಗದ ಮೌಲ್ಯಮಾಪನದಲ್ಲಿನ ತಾಂತ್ರಿಕ ದೋಷಗಳಿಂದ ಹಾಗೂ ಸಂಭವನೀಯ ಅಚಾತುರ್ಯಗಳಿಂದಾಗಿ ಪ್ರತಿಭಾವಂತ ವಿದ್ಯಾರ್ಥಿಗಳು ತೇರ್ಗಡೆ ಹೊಂದದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ವಿಶ್ವವಿದ್ಯಾಲಯದ ಸದರಿ ಪರೀಕ್ಷೆಯ ದಾಖಲೆಯಲ್ಲಿಯೇ ಕನಿಷ್ಟ ಮಟ್ಟದ ಫಲಿತಾಂಶ ಇದಾಗಿರುವುದರಿಂದ ವಿದ್ಯಾರ್ಥಿಗಳಿಗುಂಟಾದ ಅನ್ಯಾಯವನ್ನು ಪರಿಹರಿಸಲು ಕನಿಷ್ಟ ಹೆಚ್ಚುವರಿಯಾಗಿ ಐದು ಕೃಪಾಂಕಗಳನ್ನು ನೀಡಲು ಸರ್ಕಾರ ಕ್ರಮ ಜರುಗಿಸುವುದೇ;

ಈ) ಈ ಪರೀಕ್ಷೆಯ ಐದನೇ ಮೌಲ್ಯಮಾಪನದಲ್ಲಿ ಅಂಕಗಳು ತುಂಬ ಕಡಿಮೆಯಾಗಲು ಕಾರಣಗಳೇನು;

ಉ) ಹಾಗಿದ್ದಲ್ಲಿ, ಮೌಲ್ಯಮಾಪನದಲ್ಲಿನ ಸಂಭವನೀಯ ಲೋಪ ದೋಷಗಳನ್ನು ಸರಿಪಡಿಸಿ ವಿದ್ಯಾರ್ಥಿಗಳಿಗೆ ನ್ಯಾಯವೊದಗಿಸುವಲ್ಲಿ ಸರ್ಕಾರ ಮುಂದಾಗುವುದೇ; ಇಂಥ ಮಹತ್ವದ ಪರೀಕ್ಷೆಗಳ ಮೌಲ್ಯಮಾಪನದ ಸುವ್ಯವಸ್ಥೆಗಾಗಿ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಡಾ: ವಿ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು)

ಅ) –ಇಲ್ಲ–

ಆ) –ಇಲ್ಲ–

ಇ) ಉದ್ಭವಿಸುವುದಿಲ್ಲ.

ಈ) ಕಡಿಮೆ ಅಂಕಗಳನ್ನು ನೀಡಲಾಗಿರುವುದಿಲ್ಲ.

ಉ) ಉದ್ಭವಿಸುವುದಿಲ್ಲ.

1068 (1275) ಡಾ:ಶರಣಪ್ರಕಾಶ್ ರುದ್ರಪ್ಪ ಪಾಟೀಲ್ (ಸೇಡಂ): ಮಾನ್ಯ ಪಶುಸಂಗೋಪನೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ;

ಅ) ಡಾ: ನಂಜುಂಡಪ್ಪ ವರದಿ ಪ್ರಕಾರ ಅತೀ ಹೆಚ್ಚು ಹಿಂದುಳಿದ ತಾಲ್ಲೂಕುಗಳಲ್ಲಿ ಹೊಸ ಪಶುಚಿಕಿತ್ಸಾಲಯಗಳನ್ನು ಮಂಜೂರು ಮಾಡಲಾಗುವುದೇ;

ಆ) ಹಾಗಿದ್ದಲ್ಲಿ, ಹೊಸ ಪಶುಚಿಕಿತ್ಸಾಲಯ ತೆರೆಯಲು ಸೇಡಂ ಮತ್ತು ಚಿತ್ತಾಪುರ ತಾಲ್ಲೂಕುಗಳಲ್ಲಿ ಎಷ್ಟು ಪ್ರಸ್ತಾವನೆಗಳು ಬಂದಿವೆ: (ಹೆಸರುಗಳನ್ನು ನೀಡಿ)

ಇ) ಯಾವಾಗ ಮತ್ತು ಎಷ್ಟು ಕೇಂದ್ರಗಳನ್ನು ಚಿತ್ತಾಪುರ ಮತ್ತು ಸೇಡಂ ತಾಲ್ಲೂಕುಗಳಲ್ಲಿ ಮಂಜೂರು ಮಾಡಲಾಗುವುದು?

ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು)

ಅ) ಡಾ: ನಂಜುಂಡಪ್ಪ ರವರ ಪ್ರಾದೇಶಿಕ ಅಸಮತೋಲನಾ ನಿವಾರಣಾ ವರದಿ ಪ್ರಕಾರ ಅತೀ ಹೆಚ್ಚು ಹಿಂದುಳಿದ ತಾಲ್ಲೂಕುಗಳನ್ನೊಳಗೊಂಡಂತೆ ಯಾವ ತಾಲ್ಲೂಕುಗಳಲ್ಲಿ ಪ್ರತೀ 5000 ಜಾನುವಾರುಗಳಿಗೆ ಒಂದು ಪಶುಚಿಕಿತ್ಸಾಲಯ ಇಲ್ಲವೋ ಅಂತಹ ತಾಲ್ಲೂಕುಗಳಲ್ಲಿ ಮಾತ್ರ ಹೊಸ ಪಶುಚಿಕಿತ್ಸಾಲಯ ತೆರೆಯಲು ಕ್ರಮ ಜರುಗಿಸಲಾಗುತ್ತಿದೆ. ಇದು 8 ವರ್ಷಗಳ ಅವಧಿಯ ಕಾರ್ಯಕ್ರಮವಾಗಿರುತ್ತದೆ.

ಆ) ಹೊಸ ಪಶುಚಿಕಿತ್ಸಾಲಯಗಳನ್ನು ತೆರೆಯಲು ಸೇಡಂ ತಾಲ್ಲೂಕಿನ 5 ಗ್ರಾಮಗಳಿಗೆ ಮತ್ತು ಚಿತ್ತಾಪುರ ತಾಲ್ಲೂಕಿನ 10 ಗ್ರಾಮಗಳಿಗೆ ಪ್ರಸ್ತಾವನೆಗಳು ಬಂದಿವೆ. ಅವುಗಳ ವಿವರ ಈ ಕೆಳಗೆ ನೀಡಿದೆ.

ಸೇಡಂ ತಾಲ್ಲೂಕು	1) ಹಂದರಕಿ 2) ಸಾಲಹಳ್ಳಿ 3) ಮೆದಕ	4) ದುಗನೂರು 5) ತೊಟ್ನಳ್ಳಿ